**ಅಧ್ಯಕ್ಷರು:** ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2013ನೇ ಸಾಲಿನ ಕರ್ನಾಟಕ ಅಬ್ಕಾರಿ (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು.

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

**ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.**

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

6. **ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆಯ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕ, 2013 ಪರ್ಯಾಲೋಚನಾ ಪ್ರಸ್ತಾವ**

**ಶ್ರೀ ಜಗದೀಶ್ ಶೆಟ್ಟರ್**(ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆಯ ಮೇಲೆ ತೆರಿಗೆ ನಿರ್ಧರಣೆ)(ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

**ಪ್ರಸ್ತಾವ ಮಂಡಿಸಲಾಯಿತು**

**ಅಧ್ಯಕ್ಷರು:** ಈಗ ಪರ್ಯಾಲೋಚನಾ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ. 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆಯ ಮೇಲೆ ತೆರಿಗೆ ನಿರ್ಧರಣೆ)(ತಿದ್ದುಪಡಿ) ವಿಧೇಯಕವನ್ನು ಸಭೆಯು ಪರ್ಯಾಲೋಚಿಸುತ್ತದೆ ಎಂಬ ವಿಷಯ ಸಭೆಯ ಮುಂದೆ ಇದೆ.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

**ಪ್ರಸ್ತಾವಕ್ಕೆ ಅನುಮೋದನೆ ದೊರಕಿದೆ.**

**ಈಗ ವಿಧೇಯಕವನ್ನು ಖಂಡ ಖಂಡವಾಗಿ ಮತಕ್ಕೆ ಹಾಕುತ್ತೇನೆ.**

ಖಂಡ 2ರಿಂದ 9

**ಅಧ್ಯಕ್ಷರು:** 2 ರಿಂದ 9ನೇ ಖಂಡಗಳು ವಿಧೇಯಕದ ಅಂಗವಾಗಿರಬೇಕೆನ್ನುವುದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
**ಪ್ರಸ್ತಾವಕ್ಕೆ ಒಪ್ಪಿಗೆ ದೊರಕಿದೆ.**
**2 ರಿಂದ 9ನೇ ಖಂಡಗಳು ವಿಧೇಯಕದ ಅಂಗವಾದವು.**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.**

(2 ರಿಂದ 9ನೇ ಖಂಡಗಳನ್ನು ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು).

**ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆ**

**ಅಧ್ಯಕ್ಷರು:** ಮೊದಲನೇ ಖಂಡ ಹೆಸರು ಮತ್ತು ಅವತರಣಿಕೆಗಳು ವಿಧೇಯಕದ ಭಾಗವಾಗಬೇಕೆಂದು ಸಭೆಯ ಮುಂದಿರುವ ವಿಷಯ.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು ಇಲ್ಲ ಎಂದು ಸೂಚಿಸಬೇಕು
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆಯೆಂದು ಭಾವಿಸುತ್ತೇನೆ.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
**ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ.**
**ಪ್ರಥಮ ಖಂಡ ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.**

**ಪ್ರಸ್ತಾವ ಅಂಗೀಕರಿಸಲ್ಪಟ್ಟಿತು**

(ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

**ಅಧ್ಯಕ್ಷರು** : ಮಾನ್ಯ ಮುಖ್ಯಮಂತ್ರಿಯವರು ಅಂಗೀಕಾರ ಪ್ರಸ್ತಾವವನ್ನು ಮಂಡಿಸಬೇಕು.

**ಪ್ರಸ್ತಾವದ ಅಂಗೀಕಾರ**

**ಶ್ರೀ ಜಗದೀಶ್ ಶೆಟ್ಟರ್ (ಮಾನ್ಯ ಮುಖ್ಯಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ, 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ(ಬಳಕೆಯ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

**ಅಧ್ಯಕ್ಷರು** : ಪ್ರಸ್ತಾವವನ್ನು ಮಂಡಿಸಲಾಗಿದೆ. ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ. 2013ನೇ ಸಾಲಿನ ಕರ್ನಾಟಕ ವಿದ್ಯುಚ್ಛಕ್ತಿ (ಬಳಕೆಯ ಮೇಲೆ ತೆರಿಗೆ ನಿರ್ಧರಣೆ) (ತಿದ್ದುಪಡಿ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು.

ಪ್ರಸ್ತಾವದ ಪರವಾಗಿರುವವರು **ಹೌದು** ಎಂದು ಸೂಚಿಸಬೇಕು
ಪ್ರಸ್ತಾವದ ವಿರೋಧವಾಗಿರುವವರು **ಇಲ್ಲ** ಎಂದು ಸೂಚಿಸಬೇಕು.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ
ಪ್ರಸ್ತಾವ **ಹೌದು** ಎನ್ನುವವರ ಪರವಾಗಿದೆ

**ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.**

(ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಅನುಮೋದನೆ ನೀಡಲಾಯಿತು)

**6. ವಿತ್ತೀಯ ಕಾರ್ಯಕಲಾಪ**

2012–13ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಹಾಗೂ ಮತಕ್ಕೆ ಹಾಕುವುದು.

**ಅಧ್ಯಕ್ಷರು** : 2012–13ನೇ ಸಾಲಿನ ಪೂರಕ ಅಂದಾಜುಗಳ (ಮೂರನೇ ಹಾಗೂ ಅಂತಿಮ ಕಂತು) ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

**ಶ್ರೀ ಜಗದೀಶ್ ಶೆಟ್ಟರ್(ಮುಖ್ಯಮಂತ್ರಿಗಳು)** : ಮಾನ್ಯ ಅಧ್ಯಕ್ಷರೆ, 2012–13ನೇ ಸಾಲಿಗೆ 1,17,000 ಕೋಟಿ ರೂ.ಗಳ ಆಯವ್ಯಯಕ್ಕೆ ಸದನವು ಅನುಮೋದನೆ ನೀಡಿದೆ. ಪೂರಕ ಒಂದು ಮತ್ತು ಎರಡನೇ ಕಂತಿನಲ್ಲಿ ಒಟ್ಟು